ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ

ದಿನಾಂಕ : DATE : 18/07/2019

# ವಿಶ್ವಾಸಮತ ಕಲಾಪಕ್ಕೆ ಬರಲ್ಲ: ಅತೃಪ್ತರು



ಮೈತ್ರಿ ಸರ್ಕಾರದ ಅಳಿವು ಉಳಿವಿನ ಕ್ಷಣಗಣನೆ ಆರಂಭವಾಗಿರುವ ಹೊತ್ತಲ್ಲೇ ಮುಂಬೈನಲ್ಲಿದ್ದ ಅತೃಪ್ತ ಶಾಸಕರೆಲ್ಲರೂ ಅಜ್ಞಾತ ಸ್ಥಳಕ್ಕೆ ತೆರಳಿದ್ದಾರೆ. ಅಲ್ಲದೆ, ಸುಪ್ರೀಂಕೋರ್ಟ್ ತೀರ್ಪಿನಿಂದ ನಿರಾಳರಾಗಿರುವ ಅತೃಪ್ತರು, ಗುರುವಾರ ನಡೆಯುವ ವಿಧಾನಮಂಡಲ ಅಧಿವೇಶನಕ್ಕೆ ಹಾಜರಾಗುವುದಿಲ್ಲ ಎಂದು 19 ಸೆಕೆಂಡ್‌ಗಳ ವಿಡಿಯೋವೊಂದನ್ನು ಬಿಡುಗಡೆ ಮಾಡಿ ತಿಳಿಸಿದ್ದಾರೆ. — ವಿವರ 7

# ವಿಶ್ವಾಸಮತ ಕಲಾಪಕ್ಕೆ ಬರಲ್ಲ: ಅತೃ

## ಮುಂಬೈನ ರೆನೆಸಾನ್ಸ್ ಹೋಟೆಲಿಂದ ಮೊನ್ನೆಯೇ ಶಾಸಕರು ಅಜ

• ಕನ್ನಡಪ್ರಭ ವಾರ್ತೆ ಬೆಂಗಳೂರು 15/7/19

ಮೈತ್ರಿ ಸರ್ಕಾರದ ಅಳಿವು ಉಳಿವಿನ ಕ್ಷಣಗಣನೆ ಆರಂಭವಾಗಿರುವ ಬೆನ್ನಲ್ಲೇ ಮುಂಬೈನಲ್ಲಿದ್ದ ಅತೃಪ್ತ ಶಾಸಕರೆಲ್ಲರೂ ಅಜ್ಞಾತ ಸ್ಥಳಕ್ಕೆ ಸ್ಥಳಾಂತರಗೊಂಡಿದ್ದಾರೆ. ಅಲ್ಲದೆ, ಸುಪ್ರೀಂಕೋರ್ಟ್ ತೀರ್ಪಿನಿಂದ ನಿರಾಳರಾಗಿರುವ ಅತೃಪ್ತರು ಗುರುವಾರ ನಡೆಯುವ ವಿಧಾನಮಂಡಲ ಅಧಿವೇಶನಕ್ಕೆ ಹಾಜರಾಗುವುದಿಲ್ಲ ಎಂದು ತಿಳಿಸಿದ್ದಾರೆ.

ಮೈತ್ರಿ ಕೂಟದ ನಾಯಕರ ಮನವೊಲಿಕೆ ಯತ್ನ [illegible] ಅಜ್ಞಾತ ಸ್ಥಳಕ್ಕೆ ಮಂಗಳವಾರವೇ ಸ್ಥಳಾಂತರಗೊಂಡಿರುವ ಅತೃಪ್ತರು, ಆ ತಾಣದಿಂದಲೆ 19 ಸೆಕೆಂಡ್‌ಗಳ ವಿಡಿಯೋ ಒಂದನ್ನು ಮಾಧ್ಯಮಗಳಿಗೆ ತಲುಪಿಸಿದ್ದಾರೆ. ಈ ವಿಡಿಯೋದಲ್ಲಿ ಮಾತನಾಡುವ ಶಾಸಕ ಬಿ.ಸಿ. ಪಾಟೀಲ್ ಅವರು ವಿಶ್ವಾಸಮತ ಯಾಚನೆ ವೇಳೆ ನಾವು ವಿಧಾನಸಭೆಗೆ ಗೈರು ಹಾಜರಾಗುವುದಾಗಿ ತಿಳಿಸಿದ್ದಾರೆ.

ಸುಪ್ರೀಂ ಕೋರ್ಟ್ ತೀರ್ಪಿನಿಂದ ನಮ್ಮೆಲ್ಲರಿಗೂ ಸಂತೋಷವಾಗಿದೆ. ತೀರ್ಪನ್ನು ನಾವು ಗೌರವಿಸುತ್ತೇವೆ. ನಾವೆಲ್ಲರೂ ಒಗ್ಗಟ್ಟಾಗಿದ್ದು, ಯಾವುದೇ ಕಾರಣಕ್ಕೂ ರಾಜೀನಾಮೆ ಹಿಂಪಡೆಯುವುದಿಲ್ಲ. ಹೀಗಾಗಿ, ಮೈತ್ರಿ ಸರ್ಕಾರದ ವಿಶ್ವಾಸ ಮತ ಯಾಚನೆ ಕೋರುವ ದಿನವಾದ ಗುರುವಾರ ವಿಧಾನಸಭೆ ಕಲಾಪಕ್ಕೆ ಹೋಗುವುದಿಲ್ಲ ಎಂದು ಹೇಳಿದ್ದಾರೆ. ಈ ವಿಡಿಯೋದಲ್ಲಿ ರಮೇಶ್ ಜಾರಕಿಹೊಳಿ, ಮಹೇಶ್ ಕುಮಟಳ್ಳಿ, ಭೈರತಿ ಬಸವರಾಜು, ಮುನಿರತ್ನ, ಎಸ್.ಟಿ. ಸೋಮಶೇಖರ್, ಪ್ರತಾಪ್‌ಗೌಡ ಪಾಟೀಲ್, ಬಿ.ಸಿ.ಪಾಟೀಲ್, ಶಿವರಾಮ್ ಹೆಬ್ಬಾರ್, ಜೆಡಿಎಸ್‌ನ ಎಚ್.ವಿಶ್ವನಾಥ್, ನಾರಾಯಣಗೌಡ, ಕೆ. ಗೋಪಾಲಯ್ಯ ಒಟ್ಟಿಗೆ ನಿಂತುಕೊಂಡಿದ್ದು, ಬಿ.ಸಿ.ಪಾಟೀಲ್ ಒಬ್ಬರೇ ಮಾತನಾಡುತ್ತಾರೆ.



## ಪಕ್ಷೇತರರು ಹೈದರಾ

ಮೈತ್ರಿ ಕೂಟದ ನಾಯಕರ ಮನವೊಲಿಕೆ ಭೀತಿ
ದಿನಗಳಿಂದ ಮುಂಬೈನ ರೆನೆಸಾನ್ಸ್ ಹೋಟೆಲ್‌ನಲ್ಲಿ
ಅ ಶಾಸಕರು ಮಂಗಳವಾರ ಅಜ್ಞಾತ ಸ್ಥಳಕ್ಕೆ
ಮಾಹಿತಿಗಳ ಪ್ರಕಾರ ಅವರ ಪೂನಾದ ತಾಣವೊಂದ
ಎಂದಾಗಿದೆ. ಇನ್ನು, ಇಬ್ಬರು ಪಕ್ಷೇತರ ಶಾಸಕರನ್ನು
ಗೆ ರವಾನಿಸಲಾಗಿದೆ. ಈ ಪಕ್ಷೇತರರು ಗುರುವಾ
ಸದನಕ್ಕೆ ಬರಲಿದ್ದಾರೆ ಎಂದು ತಿಳಿದುಬಂದಿದೆ. ಈ ನ
ಗೆ ಒದಗಿಸಲಾಗಿದ್ದ ಪೊಲೀಸ್ ಭದ್ರತೆಯನ್ನು
ಬುಧವಾರವೂ ಹೋಟೆಲ್ ಗೇಟ್‌ನಲ್ಲಿ ಮಹಾರಾ